ಮತ್ತು ನಡವಳಿಕೆಗಳಿಂದ ಕಾಲವನ್ನು ಒಳ್ಳೆಯ ಅಥವಾ ಕೆಟ್ಟ ಕಾಲವನ್ನಾಗಿ ಪರಿವರ್ತಿಸಬಲ್ಲರು.

10. ನೀವು ಯಾವುದೇ ಮನೆದೇವರು ಅಥವಾ ಕುಲದೇವರುಗಳ ಅಡಿಯಾಳಾಗಿ ಬದುಕಬೇಕಾಗಿಲ್ಲ. ಮನುಷ್ಯ ಸಮಾಜದ ಮಾನವೀಯ ಮೌಲ್ಯಗಳೇ ಮನುಷ್ಯನ ಮೊದಲನೆಯ ಹಾಗೂ ಕೊನೆಯ ದೇವರು.

11. ಮಾನವರೆಲ್ಲರೂ ಸಮಾನರು. ಪುರುಷನು ಸ್ತ್ರೀಗಿಂತ ಮೇಲು ಎಂದು ಹೇಳುವ ಎಲ್ಲ ಧರ್ಮಗಳನ್ನೂ, ಎಲ್ಲ ಸಂಪ್ರದಾಯಗಳನ್ನೂ ನೀವು ಇಂದು ತಿರಸ್ಕರಿಸಿದ್ದೀರಿ.

12. ಹೆಂಡತಿಯಾಗಲೀ, ಗಂಡನಾಗಲೀ ಪರಸ್ಪರ ಅಧೀನರೂ ಅಲ್ಲ, ಆಜ್ಞಾನುವರ್ತಿಯೂ ಅಲ್ಲ. ಹೆಂಡತಿಯೂ ಗಂಡನಷ್ಟೇ ಸ್ವತಂತ್ರಳೂ ಸಮಾನತೆಯುಳ್ಳವಳೂ ಆಗಿರುತ್ತಾಳೆ.

13. ಗಂಡ–ಹೆಂಡಿರನ್ನು ಒಟ್ಟಿಗೆ ಬದುಕುವಂತೆ ಮಾಡುವ ಸಾಧನ ಪ್ರೀತಿಯೊಂದೇ. ಒಬ್ಬರನ್ನೊಬ್ಬರು ಪ್ರೀತಿಸದವರು ತಾಳಿ ಕಟ್ಟಿಕೊಂಡರೂ ವ್ಯರ್ಥ, ಅಗ್ನಿಯನ್ನು ಸುತ್ತಿದರೂ ವ್ಯರ್ಥ, ಯಾವ ಯಾವ ಶಾಸ್ತ್ರಾಚಾರದ ಪ್ರಕಾರ ಮದುವೆಯಾದರೂ ವ್ಯರ್ಥ.

14. ದೇವರ ಬಗ್ಗೆ ಎಂದೂ ಸುಳ್ಳು ಹೇಳಕೂಡದು. ನಿಮ್ಮ ಅನುಭವ, ನಿಮಗೆ ದೇವರು ಇಲ್ಲವೆಂದು ತಿಳಿಸಿದರೆ ದೇವರು ಇಲ್ಲವೆಂದು ಹೇಳಿ.

15. ನಿಮ್ಮ ಅನುಭವ, ನಿಮಗೆ ದೇವರು ಇದ್ದಾನೆಂದು ತಿಳಿಸಿದರೆ ದೇವರು ಇದ್ದಾನೆಂದು ಹೇಳಿ.

16. ನಿಮ್ಮ ಅನುಭವ, ದೇವರು ಇದ್ದಾನೆಯೋ ಇಲ್ಲವೋ ತಿಳಿಯದೆಂದು ತಿಳಿಸಿದರೆ, ದೇವರು ಇದ್ದಾನೆಯೋ ಇಲ್ಲವೋ ತಿಳಿಯದೆಂದು ಹೇಳಿ.

17. ನಮ್ಮ ಅನುಭವವನ್ನು ಸುಳ್ಳು ಹೇಳದೆ ಒಪ್ಪಿಕೊಳ್ಳುವುದು, ನಿರ್ಭೀತಿಯಿಂದ ವಾಸ್ತವ ಸ್ಥಿತಿಯನ್ನು ನೋಡುವುದು ಸತ್ಯಾನ್ವೇಷಣೆಯ ಮೊದಲನೆಯ ಹಂತ. ಜ್ಞಾನ ಯೋಗದ ಮೊದಲ ಪಾಠ.

18. ಪರವಂಚನೆ ಮತ್ತು ಆತ್ಮವಂಚನೆ ಮಾಡಿಕೊಳ್ಳುವವನಿಗೆ ತಮಸ್ಸಿನಿಂದಲೂ, ಅಜ್ಞಾನದಿಂದಲೂ ವಿಮುಕ್ತಿಯೇ ಇಲ್ಲ.

19. ದೇವರ ಹೆಸರಿನಲ್ಲಿ ಸುಳ್ಳು ಹೇಳುವ ಮಠಾಧಿಪತಿಗಳನ್ನು ಆಚಾರರನ್ನೂ ಜಗದ್ಗುರುಗಳನ್ನೂ ತಿರಸ್ಕರಿಸಿರಿ.

20. ದೇವರ ಹೆಸರಿನಲ್ಲಿ ಧನಾರ್ಜನೆ ಮಾಡುವ ತೀರ್ಥಕ್ಷೇತ್ರಗಳನ್ನೂ, ದೇವಸ್ಥಾನಗಳನ್ನೂ ತಿರಸ್ಕರಿಸಿರಿ, ದೇವರ ಹೆಸರಿನಲ್ಲಿ ದರೋಡೆ ಮಾಡುವ ಯಾತ್ರಾಸ್ಥಳಗಳನ್ನು ತಿರಸ್ಕರಿಸಿರಿ.

ವರದಕ್ಷಿಣೆ ಅಥವಾ ವಧುದಕ್ಷಿಣೆ ವ್ಯವಹಾರಗಳಿಗೆ ಒಳಗಾಗದೆ, ನೀವು ನಿಮ್ಮ ಸ್ವಂತ ಪ್ರಯತ್ನದಿಂದ ನಿಮ್ಮ ತಂದೆ ತಾಯಿಗಳಿಗೆ ಯಾವ ರೀತಿಯ ಆರ್ಥಿಕ ಹೊರೆಯಾಗದಂತೆ ವಿವಾಹ ಮಾಡಿಕೊಳ್ಳುತ್ತಿದ್ದೀರಿ.

ಎಲ್ಲ ಮತಧರ್ಮ, ಕಂದಾಚಾರ, ಅಜ್ಞಾನಗಳಿಂದ ವಿಮುಕ್ತರಾಗಿರುವ ವಧೂವರರೇ, ಮಾನವ ಕೋಟಿಯನ್ನು ನಿಮ್ಮಂತೆಯೇ ವಿಮುಕ್ತರನ್ನಾಗಿ ಮಾಡುವ ಪವಿತ್ರ ಕರ್ತವ್ಯವನ್ನು ನೀವು ಮಾಡಿರಿ. ಇನ್ನು ನೀವು ಯಾವುದೇ ಧರ್ಮಕ್ಕೂ ಸೇರುವ ಅಗತ್ಯವಿಲ್ಲ. ಯಾವುದೇ ಮತಕ್ಕೂ ಸೇರುವ ಅಗತ್ಯವಿಲ್ಲ. ಯಾವುದೇ ಶಾಸ್ತ್ರಾಚಾರವನ್ನೂ ಅನುಸರಿಸಬೇಕಾದ ಅಗತ್ಯವಿಲ್ಲ. ಮೇಲೆ ಬೋಧಿಸಿರುವ ಪ್ರತಿಜ್ಞಾವಿಧಿಗಳೇ ನಿಮ್ಮ ಜೀವನದ ದಾರಿದೀಪವಾಗಲಿ. ಮೌಢ್ಯ, ಅಜ್ಞಾನ, ಅಂಧಕಾರಗಳ ವಿರುದ್ಧ ಭಾರತೀಯರಾದ ನಾವೆಲ್ಲ ಹೂಡಿರುವ ಈ ಮಹಾ ಹೋರಾಟದಲ್ಲಿ ನೀವೂ ಭಾಗಿಗಳಾಗಬೇಕೆಂದು ನಾವು ವಿನಂತಿಸಿಕೊಳ್ಳುತ್ತೇವೆ. ನೀವು ಇಲ್ಲಿ ಈ ದಿನದಿಂದ ದಂಪತಿಗಳೆಂದು ನಾವು ಘೋಷಿಸುತ್ತೇವೆ.

ವರನ ಸಹಿ:

ವಧುವಿನ ಸಹಿ:

ಸಾಕ್ಷಿಗಳು:

ವರನ ತಂದೆ – ತಾಯಿ ಸಹಿ:

ವಧುವಿನ ತಂದೆ – ತಾಯಿ ಸಹಿ:

ಬಂಧು, ಬಳಗ, ಸ್ನೇಹಿತರ ಸಹಿ:

(ಉದಯರವಿ ಪ್ರಕಾಶನದ 'ಮಂತ್ರ ಮಾಂಗಲ್ಯ' ಕಿರುಹೊತ್ತಿಗೆಯ ಆಯ್ದ ಭಾಗ)




ಶಿವಮೊಗ್ಗದಲ್ಲಿ ಉದಯ್ ಮತ್ತು ದಿವ್ಯ ಮಂತ್ರ ಮಾಂಗಲ್ಯ ಮೂಲಕ ದಾಂಪತ್ಯಜೀವನಕ್ಕೆ ಕಾಲಿಟ್ಟರು.

ನಿಜಾಚರಣೆಯಲ್ಲಿ ಧಾನ್ಯವನ್ನು ಬಳಸುವುದಿಲ್ಲ. ಬಿಡಿ ಹೂವುಗಳನ್ನು ಎರಚಿ ಹರಸುತ್ತಾರೆ. ಇಲ್ಲಿ ಗಂಡು–ಹೆಣ್ಣಿಗೆ ಸಮಾನತೆಯ ಬಂಧನದ ಬೆಸುಗೆ ಹಾಕಲಾಗುತ್ತದೆ. ಗಂಡು ಹೆಣ್ಣಿಗೆ ತಾಳಿ ಕಟ್ಟಿದರೆ, ಹೆಣ್ಣು ಗಂಡಿಗೆ ರುದ್ರಾಕ್ಷಿಯನ್ನು ಕಟ್ಟುತ್ತಾಳೆ. ನಂತರ ಪ್ರತಿಜ್ಞಾ ವಚನದ ಬೋಧನೆಯನ್ನು ಬೋಧಿಸುತ್ತಾರೆ. ಅದರಂತೆ 'ದಂಪತಿಯಾದ ನಾವು ಕಾಯಕ ದಾಸೋಹವನ್ನು ಮಾಡಿ ದೇಶ ನಾಡನ್ನು ಕಟ್ಟಲು ನೆರವಾಗುತ್ತೇವೆ' ಎಂದು ಪ್ರಮಾಣ ಸ್ವೀಕರಿಸುತ್ತಾರೆ.

ಪ್ರತಿ ತಿಂಗಳ 5ನೇ ತಾರೀಕು ಯಾವುದೇ ವಾರ, ತಿಥಿ, ನಕ್ಷತ್ರ ಇದ್ದರೂ ಅದನ್ನು ಲೆಕ್ಕಿಸದೆ, ಮುಹೂರ್ತವನ್ನೂ ಪರಿಗಣಿಸದೆ, ಸಾಮೂಹಿಕ ಮದುವೆಯನ್ನು ಮಾಡಿಸುತ್ತಿರುವುದಾಗಿ ಮುರುಘಾ ಮಠದ ಆಡಳಿತ ಮಂಡಳಿಯ ಸದಸ್ಯರಲ್ಲಿ ಒಬ್ಬರಾದ ಬಸುಕುಮಾರ ಸ್ವಾಮೀಜಿ ಹೇಳುತ್ತಾರೆ. ಇಲ್ಲಿ ಅಂತರ ಧರ್ಮ, ಅಂತರ್ಜಾತಿ, ವಿಧವಾ ವಿವಾಹಗಳು ಸಾಕಷ್ಟು ಆಗಿವೆ.

ಮುರುಘಾ ಮಠದ ಸಾಮೂಹಿಕ ಮದುವೆ ಮಾಹಿತಿಗೆ ಸಂಪರ್ಕ: **8310637575**

## 'ಮಾನವ ಮಂಟಪ'ದಲ್ಲಿ ಕಲ್ಯಾಣ

ಕುವೆಂಪು ಅವರ ಸರಳ ಮದುವೆಯ ಆದರ್ಶ ಮೈಸೂರಿನಲ್ಲಿ ಆಂದೋಲನದಂತೆ ನಡೆಯುತ್ತಿದೆ. ಕೆ. ರಾಮದಾಸ್, ಶಿವರಾಮ ಕಾಡನಕುಪ್ಪೆ,